# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : M/s Tata Power Renewable Energy Limited ಕಂಪನಿಗೆ ಗದಗ ಮತ್ತು ಕೊಪ್ಪಳ ಜಿಲ್ಲೆಗಳ ಗಜೇಂದ್ರಗಡ, ರೋಣ ಮತ್ತು ಯಲಬುರ್ಗ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 252 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :**

1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KREDL/08/TPREL – 252 MW/Gadag & Koppal/F-16(2023)/0785, ದಿನಾಂಕ: 10.03.2023.
2) ದಿನಾಂಕ:14.03.2023 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡಾವಳಿ.
3) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರ.ಸಂ. (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Tata Power Renewable Energy Limited ಕಂಪನಿಯು ಗದಗ ಮತ್ತು ಕೊಪ್ಪಳ ಜಿಲ್ಲೆಗಳ ಗಜೇಂದ್ರಗಡ, ರೋಣ ಮತ್ತು ಯಲಬುರ್ಗ ತಾಲ್ಲೂಕುಗಳ ಸೂದಿ, ಇಟಗಿ, ಗುಲಗುಲಿ, ಮುಶೀಗೇರಿ, ದ್ಯಾಮನಹುನಸಿ, ಕಲ್ಕಾಪುರ ಮತ್ತು ಸಿರಗುಂಪಿ, ಹಿರೇಮಾಯಗೇರಿ, ಸೋಮಾಪುರ, ನಿಡಗುಂದಿ, ಸಂಕನೂರು, ಹೊಸಹಳ್ಳಿ, ರಾಜೂರು, ದುಂಡಾಪುರ ಹಾಗೂ ಬೇವಿನಕಟ್ಟಿ ಗ್ರಾಮಗಳಲ್ಲಿ 252 ಮೆ.ವ್ಯಾ. ಪವನ ವಿದ್ಯುತ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕೆ.ಆರ್.ಇ.ಡಿ.ಎಲ್.ಗೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು Proposed Gadag CTU ವಿದ್ಯುತ್ ಪ್ರಸರಣ ಜಾಲಕ್ಕೆ ಜೋಡಿಸಿ, ಹೊರ ರಾಜ್ಯಗಳಿಗೆ SECI ಬಿಡ್ಡಿಂಗ್/ ಮೂರನೇ ವ್ಯಕ್ತಿಗೆ Inter State Transmission System (ISTS) ಮುಖಾಂತರ ವಿದ್ಯುತ್ ಸರಬರಾಜು ಮಾಡುವ ವರ್ಗದಡಿ ಪ್ರತಿ ವಿಂಡ್‌ಟರ್ಬೈನ್‌ಗೆ 10 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ ಅಳವಡಿಸುವಂತೆ ಷರತ್ತುಗಳನ್ನು ವಿಧಿಸಿ ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

M/s Tata Power Renewable Energy Limited ಇವರು ಹಂಚಿಕೆಗಾಗಿ ಕೋರಿರುವ ಸ್ಥಳವು ಈ ಹಿಂದೆ M/s Shri Rangamani Consultants Private Limited ಕಂಪನಿಗೆ ದಿನಾಂಕ:05.07.2018ರಂದು ನಡೆದ ರಾಜ್ಯಮಟ್ಟದ ಹಂಚಿಕೆ ಸಮಿತಿ ಸಭೆಯಲ್ಲಿ 5.1 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ತಾತ್ವಿಕ ಅನುಮೋದನೆಗೆ ಸಲ್ಲಿಸಿದ್ದ ಪ್ರಸ್ತಾವನೆಯ ಮೇಲೆ ಬರುತ್ತಿದ್ದು, M/s Shri Rangamani Consultants Private Limited ಕಂಪನಿಯು ದಿನಾಂಕ:26.12.2022ರಂದು ಕೆ.ಆರ್.ಇ.ಡಿ.ಎಲ್. ನಿಯಮಿತಕ್ಕೆ ಮನವಿ ಸಲ್ಲಿಸಿ, ಸದರಿ ಯೋಜನೆಯನ್ನು ಕಾರಣಾಂತರಗಳಿಂದ ಹಿಂಪಡೆಯುವುದಾಗಿ ತಿಳಿಸಿರುತ್ತಾರೆ. ಆದ್ದರಿಂದ, M/s Tata Power Renewable Energy Limited ಕಂಪನಿಯು ಹಂಚಿಕೆಗಾಗಿ ಕೋರಿರುವ ಸ್ಥಳವು ಲಭ್ಯವಿರುತ್ತದೆ.

M/s Tata Power Renewable Energy Limited ಕಂಪನಿಯು 252 ಮೆ.ವ್ಯಾ. ಸಾಮರ್ಥ್ಯಕ್ಕೆ 3.6 ಮೆ.ವ್ಯಾ. ಸಾಮರ್ಥ್ಯದ 70 ವಿಂಡ್ ಟರ್ಬೈನ್‌ಗಳನ್ನು ಅಳವಡಿಸುತ್ತಿದ್ದು, ಪ್ರತಿ ವಿಂಡ್ ಟರ್ಬೈನ್‌ಗೆ 10 ಎಕರೆಯಂತೆ ಲೆಕ್ಕೀಕರಿಸಿ ಒಟ್ಟು 700 ಎಕರೆ (70 Nos. of WTG X 10 Acres = 700 Acres) ಜಮೀನನ್ನು ಟೋಪೋಶೀಟ್ ಸಂಖ್ಯೆ:48 M/13 & 48 M/14 ಉಪಯೋಗಿಸಿಕೊಳ್ಳಬಹುದಾಗಿದೆ ಹಾಗೂ ಯೋಜನೆಗೆ ಬೇಕಾಗುವ ರಸ್ತೆ ಮತ್ತು Pooling Substation ಗೆ ಜಮೀನುಗಳನ್ನು ಅಗತ್ಯಕ್ಕೆ ತಕ್ಕಂತೆ ತೆಗೆದುಕೊಳ್ಳಬಹುದಾಗಿದೆ ಎಂದು ಕೆ.ಆರ್.ಇ.ಡಿ.ಎಲ್. ನಿಯಮಿತವು ತಿಳಿಸಿರುತ್ತದೆ.

....2

M/s Tata Power Renewable Energy Limited ದಿನಾಂಕ:14.07.2017ರಂದು ನೋಂದಾವಣೆಗೊಂಡಿದ್ದು, ಇದರ ನೋಂದಾಯಿತ ಕಚೇರಿಯು ಮಹಾರಾಷ್ಟ್ರದಲ್ಲಿ ಸ್ಥಾಪಿತಗೊಂಡಿರುತ್ತದೆ. ಸದರಿ ಕಂಪನಿಯ ನೆಟ್‌ವರ್ತ್ ದಿನಾಂಕ:30.09.2022ರ ಅಂತ್ಯಕ್ಕೆ ರೂ.8541.21 ಕೋಟಿಗಳಾಗಿರುತ್ತದೆ ಎಂದು ಚಾರ್ಟೆಡ್ ಅಕೌಂಟೆಂಟ್ ದೃಢೀಕರಣ ಪತ್ರವನ್ನು ನೀಡಿರುತ್ತಾರೆ.

M/s Tata Power Renewable Energy Limited ಕಂಪನಿಯು ನವೀಕರಿಸಬಹುದಾದ ಇಂಧನ ನೀತಿ 2022-27ರಂತೆ 252 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಅರ್ಜಿಯೊಂದಿಗೆ ಪಾವತಿಸಬೇಕಾಗಿರುವ ಒಟ್ಟು ಸಂಸ್ಕರಣಾ ಶುಲ್ಕದಲ್ಲಿ 30% ಮೊತ್ತವನ್ನು ಪಾವತಿಸಿರುತ್ತಾರೆ. ಬಾಕಿ ಉಳಿದ 70% ಸಂಸ್ಕರಣಾ ಶುಲ್ಕವನ್ನು ಹಂಚಿಕೆ ಆದೇಶ ಹೊರಡಿಸಿದ ನಂತರ ಕೆ.ಆರ್.ಇ.ಡಿ.ಎಲ್. ನಿಯಮಿತದೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪೂರ್ವದಲ್ಲಿ ಸಂದಾಯ ಮಾಡಬೇಕಾಗಿರುತ್ತದೆ ಎಂದು ಕೆ.ಆರ್.ಇ.ಡಿ.ಎಲ್. ನಿಯಮಿತವು ತಿಳಿಸಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2)ರ ಹಂಚಿಕೆ ಸಮಿತಿ ಸಭೆಯಲ್ಲಿ M/s Tata Power Renewable Energy Limited ಕಂಪನಿಯು ಗದಗ ಮತ್ತು ಕೊಪ್ಪಳ ಜಿಲ್ಲೆಯ, ಗಜೇಂದ್ರಗಡ, ರೋಣ ಮತ್ತು ಯಲಬುರ್ಗ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ISTS ವರ್ಗದಡಿಯಲ್ಲಿ ಹಂಚಿಕೆ ನೀಡುವಂತೆ ಕೋರಿರುವ 252 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸ್ಥಳವು ಖಾಸಗಿ ಜಮೀನಾಗಿರುತ್ತದೆ. ಸದರಿಯವರು 3.6 ಮೆ.ವ್ಯಾ ಸಾಮರ್ಥ್ಯದ 70 ವಿಂಡ್ ಟರ್ಬೈನ್‌ಗಳನ್ನು ಅಳವಡಿಸುತ್ತಿದ್ದು, ಅಳವಡಿಸುವ Wind Turbine ಗಳಿಗೆ ಅಕ್ಷಾಂಶ ಮತ್ತು ರೇಖಾಂಶಗಳನ್ನು ನೀಡಿರುತ್ತಾರೆ. ಆದುದರಿಂದ ಸದರಿ ಅಭಿವೃದ್ಧಿದಾರರು ಅಳವಡಿಸುವ ಪ್ರತಿ ಟರ್ಬೈನ್ ನ footprint ಜಾಗಕ್ಕೆ 10 ಎಕರೆಗಳಂತೆ ಒಟ್ಟು 700 ಎಕರೆ (70 Nos of WTG x 10 Acres = 700 Acres) ಜಮೀನನ್ನು ಮಾತ್ರ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸಲು ಟೋಪೋಶೀಟ್ ಸಂಖ್ಯೆ: 48M/13 & 48 M/14 ರಲ್ಲಿ ಉಪಯೋಗಿಸಿಕೊಳ್ಳಬಹುದಾಗಿದೆ ಹಾಗೂ ಸದರಿಯವರು ಅಳವಡಿಸುವ ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ (Micrositing Guidelines) ಅಳವಡಿಸಬೇಕಾಗಿರುತ್ತದೆ. ಆದ ಕಾರಣ ಯೋಜನೆಗೆ ಬೇಕಾಗುವ ಜಮೀನನ್ನು ಪಡೆಯುವುದು ಮತ್ತು CTU ನಿಂದ Evacuation ಅನುಮತಿ ಪತ್ರ ಹಾಗೂ LTA approval ಪಡೆಯುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ.

ನಿರ್ದೇಶಕರು (ತಾಂತ್ರಿಕ), ಕೆಪಿಟಿಸಿಎಲ್ ಇವರು ಸದರಿ ಯೋಜನೆಗೆ Proposed Gadag CTU Substation ಇಂದ evacuation ನೀಡಲು KPTCL ನಿಯಮಿತದಿಂದ ಯಾವುದೇ ಅಭ್ಯಂತರವಿರುವುದಿಲ್ಲ ಎಂದು ತಿಳಿಸಿದರು. ಈ ಕೆಳಕಂಡ ಷರತ್ತಿಗೊಳಪಟ್ಟು M/s Tata Power Renewable Energy Limited ಕಂಪನಿಯು ಗದಗ ಮತ್ತು ಕೊಪ್ಪಳ ಜಿಲ್ಲೆಯ, ಗಜೇಂದ್ರಗಡ, ರೋಣ ಮತ್ತು ಯಲಬುರ್ಗ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 252 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಸಮಿತಿಯು ತೀರ್ಮಾನಿಸಿತು.

i. ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು Proposed Gadag CTU ವಿದ್ಯುತ್ ಪ್ರಸರಣ ಜಾಲಕ್ಕೆ ಜೋಡಿಸಿ, ಹೊರ ರಾಜ್ಯಗಳಿಗೆ SECI ಬಿಡ್ಡಿಂಗ್ / ಮೂರನೇ ವ್ಯಕ್ತಿಗೆ Inter State Transmission System (ISTS) ಮುಖಾಂತರ ವಿದ್ಯುತ್ ಸರಬರಾಜು ಮಾಡಲು.
ii. ಸದರಿ ಯೋಜನೆಗೆ CTU ನಿಂದ Evacuation ಅನುಮತಿ ಪತ್ರ ಹಾಗೂ LTA ಅನುಮತಿ ಪಡೆದು ಅನುಷ್ಠಾನಗೊಳಿಸುವುದು ಅಭಿವೃದ್ಧಿದಾರರ ಜವಾಬ್ದಾರಿಯಾಗಿರುತ್ತದೆ.
iii. ಈಗಾಗಲೇ ಇತರೆ ಅಭಿವೃದ್ಧಿದಾರರುಗಳು ಹಂಚಿಕೆ ಅನುಮೋದನೆಯನ್ನು ಪಡೆದಿರುವ ಪ್ರದೇಶದಲ್ಲಿ ಪ್ರಸ್ತಾಪಿತ ಯೋಜನೆಯ WTG Co-ordinates Overlap ಆಗಿದ್ದಲ್ಲಿ, ಅಂತಹ WTGs ಸಾಮರ್ಥ್ಯವು ರದ್ದುಗೊಳ್ಳುತ್ತದೆ.